ಆ) ಪ್ರಾಧ್ಯಾಪಕರು ಹಾಗೂ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳು ಇಲ್ಲದೇ ಇರುವುದರಿಂದ ಬಡ್ತಿಯ ಮೂಲಕ ತುಂಬಿರುವುದಿಲ್ಲ. ಆದಾಗ್ಯೂ ಈ ಕೊರತೆಯನ್ನು ನೀಗಲು ಖಾಸಗೀ ವೈದ್ಯರನ್ನು ಗೌರವ ಸಲಹೆಗಾರರಾಗಿ ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಎಕ್ಸರೇ ಯಂತ್ರಗಳು

758 (964) ಶ್ರೀ ಶಂಕರಲಿಂಗೇಗೌಡ ಹೆಚ್.ಎನ್. (ಚಾಮರಾಜ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಎಷ್ಟು ಎಕ್ಸ್‌ರೇ ಯಂತ್ರಗಳಿವೆ;

ಆ) ಈ ಯಂತ್ರಗಳಲ್ಲಿ ಎಷ್ಟು ಯಂತ್ರಗಳು ಕೆಟ್ಟು ನಿಂತಿವೆ;

ಇ) ಈ ಯಂತ್ರಗಳನ್ನು ಸರಿಪಡಿಸಿ ರೋಗಿಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಇರುವ ತೊಂದರೆಗಳೇನು;

ಈ) ಈ ಯಂತ್ರಗಳನ್ನು ಯಾವಾಗ ಸರಿಪಡಿಸುವುದು?

ಡಾ॥ ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಏಳು ಎಕ್ಸ್‌ರೇ ಯಂತ್ರಗಳಿವೆ.

ಆ) ಮೂರು ಯಂತ್ರಗಳು

ಇ) ಜರೂರಾಗಿ ಯಂತ್ರಗಳನ್ನು ರಿಪೇರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉಳಿದ 4 ಯಂತ್ರಗಳು ಸುಸ್ಥಿತಿಯಲ್ಲಿದ್ದು ಕಾರ್ಯನಿರ್ವಹಿಸುತ್ತಿವೆ. ಅವಶ್ಯಕತೆ ಇರುವ ರೋಗಿಗಳಿಗೆ ಎಕ್ಸ್‌ರೇ ತೆಗೆಯಲಾಗುತ್ತಿದೆ. ಎಕ್ಸ್‌ರೇ ಸೌಲಭ್ಯದಿಂದ ಯಾರೂ ವಂಚಿತರಾಗಿರುವುದಿಲ್ಲ.

ಈ) ತಕ್ಷಣದಲ್ಲಿಯೇ ರಿಪೇರಿಯನ್ನು ಮಾಡಿಸಲಾಗುವುದು.

ಮೈಸೂರಿನ ತೊಣಚಿಕೊಪ್ಪಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಘಟಕ ತೆರೆಯುವುದು

759 (965) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರುನಗರದ ತೊಣಚಿಕೊಪ್ಪಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಘಟಕ ತೆರೆಯುವಂತೆ ಪುನಃ ಬಂದಿದೆಯೆ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ?

ಆ) ಇಲ್ಲಿ ಎಂದು ಪ್ರಾಥಮಿಕ ಆರೋಗ್ಯ ಕೇಂದ್ರ ಘಟಕವನ್ನು ತೆರೆಯಲಾಗುವುದು?

ಡಾ॥ ಎ.ಬಿ.ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿಲ್ಲ

ಆ) ಉದ್ಭವಿಸುವುದಿಲ್ಲ.